**ಹಂದನಕೆರೆ ಹೋಬಳಿ ಕೇಂದ್ರದಲ್ಲಿ ಕಲಾ ಮತ್ತು ವಾಣಿಜ್ಯ ಪದವಿ ಪೂರ್ವ ಕಾಲೇಜು ಸ್ಥಾಪಿಸುವುದು**

**547 (918) ಶ್ರೀ ಸುರೇಶ್ ಬಾಬು. ಸಿ.ಬಿ. (ಚಿಕ್ಕನಾಯಕನಹಳ್ಳಿ) :** ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕು, ಹಂದನಕೆರೆ ಹೋಬಳಿ ಕೇಂದ್ರಕ್ಕೆ ಸರ್ಕಾರಿ ಪದವಿ ಪೂರ್ವ ಕಲಾ ಮತ್ತು ವಾಣಿಜ್ಯ ಕಾಲೇಜಿನ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಕಾಲೇಜು ಸ್ಥಾಪನೆಗೆ ಅವಶ್ಯಕವಾದ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಗ್ರಾಮಸ್ಥರು ಸಿದ್ದರಿರುವುದರಿಂದ ಈ ಸಾಲಿನಲ್ಲಿ ಕಾಲೇಜು ಮಂಜೂರು ಮಾಡಲಾಗುವುದೇ?

**ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :**

ಅ) ಇಲ್ಲ.

ಆ) ಸರ್ಕಾರದ ಆದೇಶ ಸಂಖ್ಯೆ:ಇಡಿ 451 ಯೋಯೋಕ 2009 ದಿನಾಂಕ: 20/02/2010 ರಲ್ಲಿ ಈಗಾಗಲೇ ಮಂಜೂರು ಮಾಡಲಾದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಎಲ್ಲಾ ಮೂಲಭೂತ ಸೌಕರ್ಯ ಗಳನ್ನು ಒದಗಿಸುವವರೆಗೆ ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜು ಗಳನ್ನು ಮಂಜೂರು ಮಾಡದಿರಲು ನಿರ್ಧರಿಸಲಾಗಿದೆ.

**ಬುಕ್ಕಾ ಪಟ್ಟಣ ಗ್ರಾಮಕ್ಕೆ ಕೆರೆಯಿಂದ ಕುಡಿಯುವ ನೀರು ಪೂರೈಕೆ**

**548 (919) ಶ್ರೀ ಸುರೇಶ್ ಬಾಬು ಸಿ.ಬಿ (ಚಿಕ್ಕನಾಯಕನಹಳ್ಳಿ) :** ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ಕ್ಷೇತ್ರದ, ಶಿರಾ ತಾಲ್ಲೂಕಿನ ಬುಕ್ಕಾಪಟ್ಟಣ ಗ್ರಾಮಕ್ಕೆ ಗ್ರಾಮದ ಕೆರೆಯ ಸಮೀಪ ನೀರು ಶುದ್ಧೀಕರಣ ಘಟಕ ಸ್ಥಾಪಿಸಿ, ಪೈಪ್‌ಲೈನ್ ಮುಖಾಂತರ ಕುಡಿಯುವ ನೀರನ್ನು ಒದಗಿಸುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಯೋಜನೆಯ ಅಂದಾಜು ಎಷ್ಟು; ಈ ಯೋಜನೆಯನ್ನು ಕಾರ್ಯಗತಗೊಳಿಸಲು ಏನು ಕ್ರಮ ಕೈಗೊಳ್ಳಲಾಗಿದೆ;

ಇ) ಹಾಗಿಲ್ಲದಿದ್ದಲ್ಲಿ, ಕುಡಿಯುವ ನೀರಿನ ಯೋಜನೆಯನ್ನು ಅನುಷ್ಠಾನಗೊಳಿಸಲು ಸಂಬಂಧಪಟ್ಟ ಇಲಾಖಾಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲಾಗುವುದೇ?

**ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :**

ಅ) ಬಂದಿದೆ.

ಆ) ಈ ಕುರಿತಂತೆ, ಯೋಜನೆ ರೂಪಿಸಲು ಪರಿಶೀಲಿಸಲಾಗುತ್ತಿದೆ.

ಇ) ಪ್ರಶ್ನಿತ ಯೋಜನೆಯ ತಾಂತ್ರಿಕ ಮತ್ತು ಆರ್ಥಿಕ ಕಾರ್ಯ ಸಿಂಧುತ್ವದ ಆಧಾರದ ಮೇಲೆ ಸರ್ಕಾರವು ಸೂಕ್ತ ಕೈಗೊಳ್ಳುವುದು.

**ಕೊಪ್ಪ ಗ್ರಾಮಕ್ಕೆ ಕುಡಿಯುವ ನೀರು ಯೋಜನೆ**

**549 (641) ಶ್ರೀ ಸುರೇಶ್ ಗೌಡ** (ನಾಗಮಂಗಲ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮದ್ದೂರು ತಾಲ್ಲೂಕು ಕೊಪ್ಪ ಹೋಬಳಿ ಕೊಪ್ಪ ಹಾಗೂ ಸುತ್ತಲಿನ ಗ್ರಾಮಗಳಿಗೆ ಶುದ್ಧ ಕುಡಿಯುವ ನೀರನ್ನು ಕೊಪ್ಪ ಕೆರೆ ಮೂಲದಿಂದ ಒದಗಿಸುವ ಯೋಜನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ;

ಆ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

**ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :**

ಅ) ಹೌದು.

ಆ) ಈ ಯೋಜನೆಯ ಆರ್ಥಿಕ ಮತ್ತು ತಾಂತ್ರಿಕ ಕಾರ್ಯಸಿಂಧುತ್ವ ಹಾಗೂ ಅನುದಾನ ಲಭ್ಯತೆ ಆಧರಿಸಿ, ಸರ್ಕಾರವು ಮುಂದಿನ ಕ್ರಮ ಕೈಗೊಳ್ಳಲಿದೆ.

**ಪಶು ವೈದ್ಯಕೀಯ ಶಾಲೆಗಳು ಮತ್ತು ಔಷಧಿಗಳ ಸರಬರಾಜು**

**550 (932) ಶ್ರೀ ತನ್ವೀರ್ ಸೇಠ್ (ನರಸಿಂಹರಾಜ)** : ಮಾನ್ಯ ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಪಶುವೈದ್ಯ ಶಾಲೆಗಳು, ಆಸ್ಪತ್ರೆಗಳು, ಸಂಚಾರಿ ಪಶು ಚಿಕಿತ್ಸಾಲಯಗಳು ಮತ್ತು ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳಿವೆ; (ಜಿಲ್ಲಾವಾರು ವಿವರ ನೀಡುವುದು)

ಆ) ಶೇಕಡ 75ರಷ್ಟು ರೈತರು ಹೈನುಗಾರಿಕೆಯಲ್ಲಿ ತೊಡಗಿದ್ದು, ಕೆಲ ಜಾನುವಾರುಗಳು ಕಾಯಿಲೆಗಳಿಗೆ ತುತ್ತಾದರೂ ಪಶು ರಕ್ಷಣೆ ಮಾಡುವ ವೈದ್ಯಾಧಿಕಾರಿಗಳು ಸಾಕಷ್ಟು ಕಡೆ ಖಿದ್ದು ಇಲ್ಲದಂತೆ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಸರ್ಕಾರದಿಂದ ಸರಬರಾಜಾಗುತ್ತಿರುವ ಕೆಲ ಔಷಧಗಳನ್ನು ಕೆಲವು ವೈದ್ಯಾಧಿಕಾರಿಗಳು ಹಣಕ್ಕಾಗಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) 2011–12ನೇ ಸಾಲಿನಲ್ಲಿ ಹೊಸದಾಗಿ ಪಶುವೈದ್ಯ ಶಾಲೆ–ಆಸ್ಪತ್ರೆಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ (ವಿವರ ಒದಗಿಸುವುದು)?

**ಶ್ರೀ ರೇವೂ ನಾಯಕ್ ಬೆಳಮಗಿ (ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು)** :

ಅ) ಜಿಲ್ಲಾವಾರು ವಿವರಗಳನ್ನು ಅನುಬಂಧ–1 ರಲ್ಲಿ ನೀಡಲಾಗಿದೆ.

ಆ) ಹೌದು. ಆದರೆ ಜಾನುವಾರುಗಳ ಆರೋಗ್ಯ ರಕ್ಷಣೆಗೆ ಸೂಕ್ತ ಕಾರ್ಯವ್ಯವಸ್ಥೆ ಮಾಡಲಾಗಿದೆ.

ಇ) ಇಲ್ಲ.

ಈ) ಇಲ್ಲ. ರಾಜ್ಯದ ಬಹಳಷ್ಟು ಪಶು ಆಸ್ಪತ್ರೆ ಮತ್ತು ಪಶು ಚಿಕಿತ್ಸಾಲಯಗಳಲ್ಲಿ ಪಶುವೈದ್ಯರ ಹುದ್ದೆಗಳು ಖಾಲಿ ಇದ್ದು, ಪದವೀಧರ ಪಶುವೈದ್ಯರ ಕೊರತೆಯಿಂದ ಈ ಹುದ್ದೆಗಳನ್ನು ತುಂಬಲು ಸರ್ಕಾರಕ್ಕೆ ಸಾಧ್ಯವಾಗುತ್ತಿಲ್ಲ. ಮೂಲಭೂತ ಸೌಕರ್ಯ ಮತ್ತು ಅರ್ಹ ಪದವೀಧರ ಪಶುವೈದ್ಯರ ಕೊರತೆಯಿಂದಾಗಿ ರಾಜ್ಯದಲ್ಲಿ ಹೊಸದಾಗಿ ಪಶುವೈದ್ಯಕೀಯ ಶಾಲೆ/ ಆಸ್ಪತ್ರೆಗಳ ತೆರೆಯುವಿಕೆಯನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ. ಆದ ಕಾರಣ, 2011–12ನೇ ಸಾಲಿನಲ್ಲಿ ಹೊಸದಾಗಿ ಪಶುವೈದ್ಯ ಶಾಲೆ–ಆಸ್ಪತ್ರೆಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.